ಓ ಎಸ್ ನಂಃ 14/2020

ಪಿ ಡಬ್ಲ್ಯೂ ಃ 1

ದಿಃ 21.02.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.

ಪಾಟೀ ಸವಾಲುಃ ಪ್ರತಿವಾದಿ 3 ರಿಂದ 8 ರ ಪರ ಶ್ರೀ ಎ ಎಸ್ ಎಸ್ ವಕೀಲರಿಂದ :-

ದಾವಾ ಸ್ವತ್ತುಗಳಲ್ಲಿ ನನಗೆ ಭಾಗಾಂಶ ಬರಬೇಕೆಂದು ಈ ದಾವೆ ಸಲ್ಲಿಸಿರುತ್ತೇನೆ. ಈ ದಾವೆಯನ್ನು ಸಲ್ಲಿಸಲು ವಕೀಲರಿಗೆ ಮಾಹಿತಿಯನ್ನು ನಾನು ಮತ್ತು ನನ್ನ ಮಗನಾದ ಚಂದ್ರಮೋಹನ್ ರವರು ನೀಡಿರುತ್ತಾರೆ. ನಾನು ಈ ದಾವೆಯನ್ನು 5 ಸ್ವತ್ತುಗಳಿಗೆ ಸಂಬಂಧಪಟ್ಟಂತೆ ಸಲ್ಲಿಸಿರುತ್ತೇನೆ. ದಾವಾ ಸ್ವತ್ತುಗಳ ಸರ್ವೆ ನಂ., ಚಕ್ಕುಬಂದಿ ಮತ್ತು ವಿಸ್ತೀರ್ಣ ಈಗ ಹೇಳಲು ಬರುವುದಿಲ್ಲ. ನನ್ನ ತಿಳುವಳಿಕೆ ಮೇರೆಗೆ ದಾವಾ ಸ್ವತ್ತಿನ ವಿಸ್ತೀರ್ಣ ಮತ್ತು ಚಕ್ಕುಬಂದಿ ಸಲ್ಲಿಸಿರುತ್ತೇನೆ. ದಾವಾ ಸ್ವತ್ತುಗಳು ತಮ್ಮ ಪಿತ್ರಾರ್ಜಿತ ಆಸ್ತಿಗಳು ಎಂದು ತೋರಿಸಲು ಯಾವ ದಾಖಲಾತಿಗಳನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದೀರಿ ಎಂದರೆ ಸಾಕ್ಷಿಯು ನನಗೆ ಗೊತ್ತಿಲ್ಲ. ದಾವಾ ಸ್ವತ್ತುಗಳ ಖಾತೆಯು ಈ ಹಿಂದೆ ನನ್ನ ತಂದೆಯ ಹೆಸರಿನಲ್ಲಿದೆ. ಪ್ರಸ್ತುತವಾಗಿ ದಾವಾ ಸ್ವತ್ತುಗಳ ಖಾತೆಯು ಯಾರ ಹೆಸರಿನಲ್ಲಿದೆ ಎಂದರೆ ಸಾಕ್ಷಿಯು ನನಗೆ ಗೊತ್ತಿಲ್ಲ. ದಾವಾ ಸ್ವತ್ತುಗಳಿಗೆ ಸಂಬಂಧಪಟ್ಟಂತೆ ನಾನು ನ್ಯಾಯಾಲಯಕ್ಕೆ ದಾಖಲಾತಿಗಳನ್ನು ಹಾಜರುಪಡಿಸಿದ್ದೇನೆ. ದಾವಾ ಸ್ವತ್ತುಗಳು ಯಾರ ಹೆಸರಿನಲ್ಲಿವೆ ಎಂದು ತಿಳಿದುಕೊಳ್ಳಲು ತಾವು ಪ್ರಯತ್ನ ಪಟ್ಟಿದ್ದೀರ ಎಂದರೆ ಸಾಕ್ಷಿ ಇಲ್ಲ ಎಂದು ಸಾಕ್ಷ್ಯ ನುಡಿಯುತ್ತಾರೆ. ದಾವಾ ಸ್ವತ್ತುಗಳು ತಮ್ಮ ಪಿತ್ರಾರ್ಜಿತ ಆಸ್ತಿಗಳು ಎಂದು ತೋರಿಸಲು ತಾವು ನ್ಯಾಯಾಲಯಕ್ಕೆ ದಾಖಲಾತಿಗಳನ್ನು ನೀಡಿರುವುದಿಲ್ಲ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ. ನನ್ನ ತಾತನ ಹೆಸರು ತಿಮ್ಮಯ್ಯ. ದಾವಾ ಸ್ವತ್ತುಗಳು ಮೂಲತಃವಾಗಿ ತಿಮ್ಮಯ್ಯನವರಿಗೆ ಸೇರಿದ್ದು ಎಂದು ತೋರಿಸಲು ತಾವು ನ್ಯಾಯಾಲಯಕ್ಕೆ ಯಾವುದೇ ದಾಖಲಾತಿಗಳನ್ನು ಹಾಜರುಪಡಿಸಿಲ್ಲ ಎಂದರೆ ನನಗೆ ಗೊತ್ತಿಲ್ಲ. ದಾವಾ ಸ್ವತ್ತುಗಳು ತಮ್ಮ ತಂದೆಯವರಿಗೆ ಸೇರಿದ ಸ್ವತ್ತುಗಳು ಎಂದು ತೋರಿಸಲು ಯಾವುದೇ ದಾಖಲಾತಿಗಳನ್ನು ಹಾಜರುಪಡಿಸಿಲ್ಲ ಎಂದರೆ ನನಗೆ ಗೊತ್ತಿಲ್ಲ. ದಾವಾ ಸ್ವತ್ತುಗಳು ಯಾವ ಆಧಾರದ ಮೇಲೆ ತಮ್ಮ ಪಿತ್ರಾರ್ಜಿತ ಆಸ್ತಿಗಳು ಎಂದು ಬರೆಸಿದ್ದೀರಿ ಎಂದರೆ ಸಾಕ್ಷಿ ನಮ್ಮ ಅಪ್ಪನಿಗೆ ಸೇರಿದ ಸ್ವತ್ತುಗಳು. ದಾವಾ ಸ್ವತ್ತುಗಳು ತಿಮ್ಮಯ್ಯ ಮತ್ತು ದಾಸೇಗೌಡ ರವರಿಗೆ ಸೇರಿದ ಸ್ವತ್ತುಗಳು ಎಂದರೆ ಸರಿಯಲ್ಲ. ದಾವಾ ಸ್ವತ್ತುಗಳಿಗೆ ಸಂಬಂಧಪಟ್ಟಂತೆ ಈ ಹಿಂದೆ ಹಲವಾರು ದಾವೆಗಳನ್ನು ಸಲ್ಲಿಸಿದ್ದರು ಎಂದರೆ ಸರಿಯಲ್ಲ. ದಾವಾ ಆಸ್ತಿಗಳ ಖಾತೆಯು ಹಿಂದೆ

ಯಾರ ಹೆಸರಿನಲ್ಲಿತ್ತು ಎಂದರೆ ಗೊತ್ತಿಲ್ಲ. ದಾವಾ ಸ್ವತ್ತುಗಳು ತಮ್ಮ ಪಿತ್ರಾರ್ಜಿತ ಆಸ್ತಿಗಳು ಅಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಗಳು ಪಿತ್ರಾರ್ಜಿತ ಆಸ್ತಿಗಳು ಆಗಿಲ್ಲದ ಕಾರಣ ತಾವು ನ್ಯಾಯಾಲಯಕ್ಕೆ ಯಾವುದೇ ದಾಖಲಾತಿಗಳನ್ನು ಹಾಜರುಪಡಿಸಿಲ್ಲ ಎಂದರೆ ಸಾಕ್ಷಿ ಗೊತ್ತಿದ್ದರೆ ಕೊಡಬಹುದಾಗಿತ್ತು ಎಂದು ನುಡಿಯುತ್ತಾರೆ.

ದಾವಾ ಸ್ವತ್ತುಗಳಲ್ಲಿ ಈಗ ಕೃಷ್ಣಪ್ಪನ ಹೆಂಡತಿ ರತ್ನಮ್ಮ ಮತ್ತು ಜಯರಾಮ ಮತ್ತು ಗೋವಿಂದರಾಜು ಸ್ವಾಧೀನದಲ್ಲಿದ್ದಾರೆ ಎಂದರೆ ಸರಿ. ನೀವು ದಾವಾ ಸ್ವತ್ತುಗಳ ಸ್ವಾಧೀನಾನುಭವದಲ್ಲಿ ಇಲ್ಲ ಎಂದರೆ ಸರಿಯಲ್ಲ. ದಾವಾ ಸ್ವತ್ತುಗಳಲ್ಲಿ ತಾವು ಜಂಟಿ ಸ್ವಾಧೀನದಲ್ಲಿ ಇದ್ದೀರಿ ಎಂದು ತೋರಿಸಲು ತಾವು ನ್ಯಾಯಾಲಯಕ್ಕೆ ಯಾವ ದಾಖಲಾತಿಗಳನ್ನು ಹಾಜರುಪಡಿಸಿದ್ದೀರಿ ಎಂದರೆ ಸಾಕ್ಷಿ ನಾನು ಯಾವುದೇ ದಾಖಲಾತಿಗಳನ್ನು ಹಾಜರುಪಡಿಸಿಲ್ಲ.

**ಮುಂದುವರೆದ ಪಾಟೀ ಸವಾಲುಃ ಕಾಲಾವಕಾಶ ಕೋರಿದ್ದಾರೆ ನೀಡಲಾಗಿದೆ.**

**(ಉಕ್ತ ಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸ ಇ ಎ ಓ**

**ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,**

**ಮಾಗಡಿ.**